# ಪ್ರಧಾನ ಸಿವಿಲ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಧೀಶರ ನ್ಯಾಯಾಲಯ, ಯಾದಗಿರಿ.

**ಸಿ.ಸಿ ನಂಃ 101/ 2015**

| | | |
|---|---|---|
| ಸಾಕ್ಷಿಯ ಹೆಸರುಃ | ಶ್ರೀ ತೇಜಾನಾಯಕ | ಫ್ರಾಸಾಃ **43** |
| ತಂದೆಯ/ಗಂಡನ ಹೆಸರುಃ | ಗಣ್ಯಾನಾಯಕ | ಚಾಸಾಃ **35** |
| ವಯಸ್ಸುಃ | **65** ವರ್ಷ | ದಿಃ **01-07-2026** |
| ಉದ್ಯೋಗಃ | ಒಕ್ಕಲುತನ | ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು. |
| ವಾಸ ಸ್ಥಳಃ | ಬೊರಬಂಡ ಗ್ರಾಮ | |

ಸಾಕ್ಷಿಗೆ ಹಿಂದಿ ಭಾಷೆ ಬರುತ್ತದೆ ಕನ್ನಡ ಭಾಷೆ ಬರುವುದಿಲ್ಲ ಎಂದು ಹೇಳಿದ ಮೇರೆಗೆ ಶ್ರೀ ವಿ ವಿ ಆರ್ ವಕೀಲರನ್ನು ಭಾಷಾಂತರಕಾರರನ್ನಾಗಿ ನೇಮಿಸಲಾಯಿತು ಹಾಗೂ ಅವರಿಗೆ ಪ್ರಮಾಣ ವಚನ ಭೊದಿಸಲಾಯಿತು.

ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ ಃ

ನನಗೆ ಚಾಸಾಃ 6 ರಿಂದ 34 ಹಾಗೂ 36 ರಿಂದ 76 ರವರ ಪರಿಚಯ ಇದೆ.

ಈಗ ಸುಮಾರು 10 ವರ್ಷಗಳ ಹಿಂದೆ ಸಂಜೆ 05 ಗಂಟೆಗೆ ಸುಮಾರಿಗೆ ಅಪಘಾತ ಆಗಿತ್ತು. ನಾವು ಆಗ ಬೆಟ್ಟದಹಳ್ಳಿ ಗ್ರಾಮಕ್ಕೆ ಹೋಗಿದ್ದೆವು. ಅಂತ್ಯಸಂಸ್ಕಾರಕ್ಕೆ ಹೋಗಿದ್ದೆವು. ಅಂತ್ಯಸಂಸ್ಕಾರ ಮುಗಿಸಿಕೊಂಡು ಮರಳಿ ಬರುತ್ತಿದ್ದಾಗ ವಾಹನ ಪಲ್ಟಿ ಆಗಿತ್ತು. ಅಪಘಾತದಲ್ಲಿ ನನ್ನ ತಲೆಗೆ ಹಾಗೂ ಹೊಟ್ಟೆಯ ಭಾಗಕ್ಕೆ ಪೆಟ್ಟಾಗಿತ್ತು. ನಂತರ ನಮ್ಮನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದರು. ಅಪಘಾತದಲ್ಲಿ ಸೋಮಲಾ ಎಂಬಾತ ಗಾಯಗೊಂಡು ಮರಣಹೊಂದಿರುತ್ತಾನೆ. ನ್ಯಾಯಾಲಯದ ಮುಂದೆ ಇರುವ ಆರೋಪಿ ನಮ್ಮ ಗ್ರಾಮದವರೇ ಆಗಿದ್ದು, ನನಗೆ ಆತನ ಪರಿಚಯ ಇದೆ. ಅಪಘಾತದ ದಿನದಂದು ವಾಹನವನ್ನು ಆರೋಪಿಯೇ ಚಾಲನೆ ಮಾಡುತ್ತಿದ್ದನು. ವಾಹನ ಇಳಿಜಾರು ರಸ್ತೆಲ್ಲಿ ಹೋಗುತ್ತಿದ್ದಾಗ ಪಲ್ಟಿ ಆಗಿತ್ತು. ನಾನು ಈ ಬಗ್ಗೆ ಪೋಲೀಸರಿಗೆ ಹೇಳಿಕೆ ನೀಡಿಲ್ಲ.

( ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿದಾರರನ್ನು ಭಾಗಶಃ ಪ್ರತಿಕೂಲ ಸಾಕ್ಷಿದಾರರು ಎಂದು ಪರಿಗಣಿಸಿ ಪಾಟೀ ಸವಾಲು ಮಡಲು ಅನುಮತಿ ಕೋರಿದರು - ಅನುಮತಿ ನೀಡಲಾಯಿತು)

<u>ಪಾಟೀ ಸವಾಲು ಃ ಮಾನ್ಯ ಸ.ಸ.ಅ. ರವರಿಂದಃ</u>

ಆರೋಪಿ ವಾಹನವನ್ನು ಅತೀವೇಗ ಹಾಗೂ ಅಲಕ್ಷ್ಯತನದಿಂದ ಚಾಲನೆ ಮಾಡುತ್ತಿದ್ದನು ಎಂದರೆ ಸಾಕ್ಷಿ ಸರಿಯಲ್ಲ, ಆತನ ನಿಧಾನವಾಗಿಯೇ ಚಾಲನೆ ಮಾಡುತ್ತಿದ್ದನು ಎಂದು ನುಡಿಯುತ್ತಾರೆ. ಆರೋಪಿಯ ತಪ್ಪಿನಿಂದ ಅಪಘಾತ ಆಗಿದೆ ಎಂದರೆ ಸರಿಯಲ್ಲ. ನಾನು ಈ ಬಗ್ಗೆ ಪೋಲೀಸರಿಗೆ ಹೇಳಿಕೆ ನೀಡಿದ್ದೆನೆ ಎಂದರೆ ಸರಿಯಲ್ಲ. ಸಾಕ್ಷಿಯ ಹೇಳಿಕೆಯನ್ನು ನಿಪಿ 110 ಎಂದು ಗುರುತಿಸಲಾಯಿತು.

<u>ಪಾಟೀ ಸವಾಲುಃ ಆರೋಪಿ ಪರವಾಗಿ ಶ್ರೀ ಎಂ ಎಂ ಇ ವಕೀಲರಿಂದ ಃ</u>

ಆರೋಪಿ ಪರ ವಕೀಲರು ಯಾವುದೇ ಪಾಟೀ ಸವಾಲು ಇಲ್ಲಾ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ ಃ ಇರುವುದಿಲ್ಲ.

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

ಓ. ಹೇ. ಕೇ. ಸರಿ ಇದೆ.

ಪ್ರಧಾನ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಧೀಶರು
ಯಾದಗಿರಿ.